ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಕನ್ನಡ ಕಾಯಕ ವರ್ಷ 2021-22

ಸಂಖ್ಯೆ:ಕಾಶಿಇ/123/ಕ.ಲೋ.ಆ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ: 02.11.2021

## ಸುತ್ತೋಲೆ

ವಿಷಯ : ಕರ್ನಾಟಕ ಲೋಕಸೇವಾ ಆಯೋಗವು ನಡೆಸುತ್ತಿರುವ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಉಳಿಕೆ ಮೂಲ ವೃಂದದ ಮತ್ತು ಹೈದ್ರಾಬಾದ್ ಕರ್ನಾಟಕ ವೃಂದದ ಗ್ರೂಪ್-ಸಿ ತಾಂತ್ರಿಕೇತರ ಹುದ್ದೆಗಳ ಸ್ಪರ್ಧಾತ್ಮಕ/ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗಳನ್ನು ನಡೆಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿಗಳು ಕರ್ನಾಟಕ ಲೋಕಸೇವಾ ಆಯೋಗ ಉದ್ಯೋಗ ಸೌಧ ಬೆಂಗಳೂರು. ಇವರ ಪತ್ರ ಸಂಖ್ಯೆ: ಪಿಎಸ್‌ಸಿ 03 ಆರ್‌ಟಿ (4)ಬಿ/2021-22, ದಿನಾಂಕ: 27.10.2021.

*****

ಕರ್ನಾಟಕ ಲೋಕಸೇವಾ ಆಯೋಗವು 2021 ನೇ ಸಾಲಿನಲ್ಲಿ ಅಧಿಸೂಚಿಸಲಾದ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಉಳಿಕೆ ಮೂಲ ವೃಂದದ ಮತ್ತು ಹೈದ್ರಾಬಾದ್ ಕರ್ನಾಟಕ ವೃಂದದ ಗ್ರೂಪ್-ಸಿ ತಾಂತ್ರಿಕೇತರ ಹುದ್ದೆಗಳ ಸ್ಪರ್ಧಾತ್ಮಕ/ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗಳನ್ನು ದಿನಾಂಕ: 04.12.2021 , 05.12.2021 ಮತ್ತು 19.12.2021 ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ನಡೆಸಲು ನಿಗಧಿಪಡಿಸಿದ್ದು, ಪೂರ್ವ ಭಾವಿ ಪರೀಕ್ಷಾ ಸಿದ್ಧತೆಗಳನ್ನು ಕೈಗೊಳ್ಳಲಾಗಿರುತ್ತದೆ. ಆದ್ದರಿಂದ ಸದರಿ ದಿನಾಂಕಗಳಂದು ಇಲಾಖಾ ವ್ಯಾಪ್ತಿಗೊಳಪಡುವ ಜಿಲ್ಲಾ ಕೇಂದ್ರ ತಾಲ್ಲೂಕು ಕೇಂದ್ರದಲ್ಲಿನ ಸರ್ಕಾರಿ/ಅನುದಾನಿತ ಕಾಲೇಜುಗಳಿಗೆ ಆದ್ಯತೆ ನೀಡಿ ಪರೀಕ್ಷಾ ಉಪ ಕೇಂದ್ರಗಳನ್ನಾಗಿ ನೀಡುವಂತೆ ಆಯೋಗವು ನಡೆಸುವ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಲು ಸಹಕರಿಸಬೇಕೆಂದು ಕೋರಿರುತ್ತಾರೆ.

ಈ ಹಿನ್ನಲೆಯಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 04.12.2021, 05.12.2021 ಮತ್ತು 19.12.2021 ರಂದು ವಿವಿಧ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಹಮ್ಮಿಕೊಂಡಿದ್ದು, ಸದರಿ ದಿನಾಂಕಗಳಂದು ಇತರೇ ಯಾವುದೇ ಪರೀಕ್ಷಾ/ಇತರೆ ಕಾರ್ಯಕ್ರಮಗಳನ್ನು ನಿಗಧಿಪಡಿಸದೆ ಕೆ.ಪಿ.ಎಸ್.ಸಿ ಪರೀಕ್ಷೆಗಳಿಗೆ ಕಾಲೇಜುಗಳ ಕಟ್ಟಡ/ ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ನೀಡಿ ಸಿಬ್ಬಂದಿಗಳ ನೆರವಿನೊಂದಿಗೆ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ಸಹಕರಿಸುವಂತೆ ಸೂಚಿಸಲಾಗಿದೆ.

R. Mugeshal

ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರು- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ – ಇವರಿಗೆ ಅಗತ್ಯ ಕ್ರಮವಹಿಸಲು.

ಪ್ರತಿಯನ್ನು :

1. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-560001, ಮಾಹಿತಿಗಾಗಿ.
2. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
3. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ
ಕನ್ನಡ ಕಾಯಕ ವರ್ಷ 2021-22

ಸಂಖ್ಯೆ:ಕಾಶಿಇ/123/ಕ.ಲೋ.ಆ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ: 02.11.2021

## ಸುತ್ತೋಲೆ

ವಿಷಯ : ಕರ್ನಾಟಕ ಲೋಕಸೇವಾ ಆಯೋಗವು ನಡೆಸುತ್ತಿರುವ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಉಳಿಕೆ ಮೂಲ ವೃಂದದ ಮತ್ತು ಹೈದ್ರಾಬಾದ್ ಕರ್ನಾಟಕ ವೃಂದದ ಗ್ರೂಪ್-ಸಿ ತಾಂತ್ರಿಕೇತರ ಹುದ್ದೆಗಳ ಸ್ಪರ್ಧಾತ್ಮಕ/ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗಳನ್ನು ನಡೆಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿಗಳು ಕರ್ನಾಟಕ ಲೋಕಸೇವಾ ಆಯೋಗ ಉದ್ಯೋಗ ಸೌಧ ಬೆಂಗಳೂರು. ಇವರ ಪತ್ರ ಸಂಖ್ಯೆ: ಆರ್ (1)1068, 2021-22/ಪಿಎಸ್‌ಸಿ, ದಿನಾಂಕ: 28.10.2021.

*****

ಕರ್ನಾಟಕ ಲೋಕಸೇವಾ ಆಯೋಗವು 2021 ನೇ ಸಾಲಿನಲ್ಲಿ ಅಧಿಸೂಚಿಸಲಾದ ತಾಂತ್ರಿಕ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ/ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬೆಂಗಳೂರು, ಬೆಳಗಾವಿ, ಕಲಬುರಗಿ ಮತ್ತು ಮೈಸೂರು ವಿಭಾಗೀಯ ಕೇಂದ್ರಗಳಲ್ಲಿ ದಿನಾಂಕ: 13.12.2021 , 14.12.2021 ಮತ್ತು 15.12.2021 ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ನಿಗಧಿಪಡಿಸಿದ್ದು, ಪೂರ್ವ ಭಾವಿ ಪರೀಕ್ಷಾ ಸಿದ್ಧತೆಗಳನ್ನು ಕೈಗೊಳ್ಳಲಾಗಿರುತ್ತದೆ. ಆದ್ದರಿಂದ ಸದರಿ ದಿನಾಂಕಗಳಂದು ಇಲಾಖಾ ವ್ಯಾಪ್ತಿಗೊಳಪಡುವ ಜಿಲ್ಲಾ ಕೇಂದ್ರ ತಾಲ್ಲೂಕು ಕೇಂದ್ರದಲ್ಲಿನ ಸರ್ಕಾರಿ/ಅನುದಾನಿತ ಕಾಲೇಜುಗಳಿಗೆ ಆದ್ಯತೆ ನೀಡಿ ಪರೀಕ್ಷಾ ಉಪ ಕೇಂದ್ರಗಳನ್ನಾಗಿ ನೀಡುವಂತೆ ಆಯೋಗವು ನಡೆಸುವ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಲು ಸಹಕರಿಸಬೇಕೆಂದು ಕೋರಿರುತ್ತಾರೆ.

ಈ ಹಿನ್ನಲೆಯಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 13.12.2021, 14.12.2021 ಮತ್ತು 15.12.2021 ರಂದು ತಾಂತ್ರಿಕ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ/ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಹಮ್ಮಿಕೊಂಡಿದ್ದು, ಸದರಿ ದಿನಾಂಕಗಳಂದು ಇತರೇ ಯಾವುದೇ ಪರೀಕ್ಷಾ/ಇತರೆ ಕಾರ್ಯಕ್ರಮಗಳನ್ನು ನಿಗಧಿಪಡಿಸದೆ ಕೆ.ಪಿ.ಎಸ್.ಸಿ ಪರೀಕ್ಷೆಗಳಿಗೆ ಕಾಲೇಜುಗಳ ಕಟ್ಟಡ/ ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ನೀಡಿ ಸಿಬ್ಬಂದಿಗಳ ನೆರವಿನೊಂದಿಗೆ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ಸಹಕರಿಸುವಂತೆ ಸೂಚಿಸಲಾಗಿದೆ.

R. Nagesh
ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರು- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಬೆಳಗಾವಿ, ಮೈಸೂರು, ಕಲಬುರಗಿ – ಇವರಿಗೆ ಅಗತ್ಯ ಕ್ರಮವಹಿಸಲು.

ಪ್ರತಿಯನ್ನು :

1. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-560001, ಮಾಹಿತಿಗಾಗಿ.
2. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
3. ಕಛೇರಿ ಪ್ರತಿ.